ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 25 -6-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ:<br>ಜಾಗೃತಿ ಜಾಥಾ ಉದ್ಘಾಟನೆ:<br>ಕುಮಾರಿ ಭಾವನ,<br>ಖ್ಯಾತ ಕಲಾವಿದರು ಹಾಗೂ ಅಧ್ಯಕ್ಷರು,<br>ಬಾಲಭವನ. | 26-6-2015<br>ಶುಕ್ರವಾರ<br>ಬೆಳಿಗ್ಗೆ<br>10-45 ಗಂಟೆಗೆ | ಗಾಂಧಿ ಪ್ರತಿಮೆ, ಮೌರ್ಯ ಹೋಟೆಲ್ ಸಮೀಪ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು. |
| | ವಿಚಾರ ಸಂಕಿರಣ ಉದ್ಘಾಟನೆ:<br>ಡಾ. ಹೋ. ಶ್ರೀನಿವಾಸಯ್ಯ,<br>ಅಧ್ಯಕ್ಷರು,<br>ಕರ್ನಾಟಕ ಗಾಂಧೀ ಸ್ಮಾರಕ ನಿಧಿ.<br>ಅಧ್ಯಕ್ಷತೆ:<br>ಎಂ.ಆರ್. ರಂಗಶಾಮಯ್ಯ,<br>ಅಧ್ಯಕ್ಷರು,<br>ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ,ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ | 26-6-2015<br>ಶುಕ್ರವಾರ<br>ಬೆಳಿಗ್ಗೆ<br>11-30 ಗಂಟೆಗೆ | ಗಾಂಧೀ ಭವನ, ಕುಮಾರಪಾರ್ಕ್, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಜುಲೈ 28 ರಂದು ಬಿ.ಬಿ.ಎಂ.ಪಿ. ಚುನಾವಣೆ:
# ಇಂದಿನಿಂದ ನೀತಿ ಸಂಹಿತೆ ಜಾರಿ

ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)

ಬೃಹತ್ ಬೆಂಗಳೂರು ಮಹಾನಗರಪಾಲಿಕೆಗೆ ಜುಲೈ 28, 2015 ರಂದು ಚುನಾವಣೆ ನಡೆಯಲಿದ್ದು, ಇಂದಿನಿಂದಲೇ ನೀತಿ ಸಂಹಿತೆ ಜಾರಿಗೆ ಬಂದಿರುತ್ತದೆ ಎಂದು ರಾಜ್ಯ ಚುನಾವಣಾ ಆಯುಕ್ತ ಪಿ.ಎನ್. ಶ್ರೀನಿವಾಸಚಾರಿ ಅವರು ತಿಳಿಸಿದರು.

ನೀತಿ ಸಂಹಿತೆಯು ತಕ್ಷಣದಿಂದ ಜಾರಿಗೆ ಬಂದಿದ್ದು, ಚುನಾವಣೆ ಪ್ರಕ್ರಿಯೆ ಮುಕ್ತಾಯವಾಗುವವರೆಗೆ ಅಂದರೆ ಆಗಸ್ಟ್ 1, 2015ರವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ ಎಂದರು.

ಆಯೋಗದ ಕಚೇರಿ ಆವರಣದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಿದ್ದ ಅವರು, ಬಿ.ಬಿ.ಎಂ.ಪಿ. ಆಯುಕ್ತರು ಜುಲೈ 8 2015ರ ಬುಧವಾರ ಅಧಿಸೂಚನೆ ಹೊರಡಿಸಲಿದ್ದು, ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ ಜುಲೈ 15, ನಾಮಪತ್ರ ಪರಿಶೀಲಿಸುವ ದಿನಾಂಕ ಜುಲೈ 16, ನಾಮಪತ್ರ ಹಿಂತೆಗೆದುಕೊಳ್ಳುವ ಕೊನೆಯ ದಿನಾಂಕ ಜುಲೈ 20, ಮತದಾನ ನಡೆಯುವ ದಿನಾಂಕ ಜುಲೈ 28ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ, ಮರು ಮತದಾನ ಅವಶ್ಯಕವಿದ್ದಲ್ಲಿ ಮತದಾನ ನಡೆಯುವ ದಿನಾಂಕ ಜುಲೈ 30, ಮತಎಣಿಕೆ ಜುಲೈ 31 ರಂದು ಬೆಳಿಗ್ಗೆ 8 ಗಂಟೆಯಿಂದ ಮತ್ತು ಚುನಾವಣೆ ಮುಕ್ತಾಯಗೊಳ್ಳುವ ದಿನ ಆಗಸ್ಟ್ 1, 2015 ಆಗಿರುತ್ತದೆ ಎಂದು ಮಾಹಿತಿ ನೀಡಿದರು.

ಚುನಾವಣೆಯ ಉಸ್ತುವಾರಿಯನ್ನು ಬಿ.ಬಿ.ಎಂ.ಪಿ. ಆಯುಕ್ತರು ನಿರ್ವಹಿಸಲಿದ್ದು, ಒಟ್ಟು 198 ವಾರ್ಡ್‌ಗಳಿಗೆ 6733 ಮತಗಟ್ಟೆ ಸ್ಥಾಪಿಸಲಾಗುವುದು ಎಂದು ತಿಳಿಸಿದ ಅವರು, ಪುರುಷ ಮತದಾರರು 3738808, ಮಹಿಳಾ ಮತದಾರರು 3382231, ಇತರೆ 1126 ಸೇರಿದಂತೆ ಒಟ್ಟು 7122165 ಮತದಾರರು ಚುನಾವಣೆಯಲ್ಲಿ ತಮ್ಮ ಮತ ಚಲಾಯಿಸುವರು ಎಂದು ಅವರು ತಿಳಿಸಿದರು.

ವಿದ್ಯುನ್ಮಾನ ಮತಯಂತ್ರಗಳ ಮೂಲಕ ಚುನಾವಣೆ ನಡೆಯಲಿದ್ದು, 9309 ಕಂಟ್ರೋಲ್ ಯೂನಿಟ್ ಹಾಗೂ 11635 ಬ್ಯಾಲೆಟ್ ಯೂನಿಟ್ ಬಳಸಲಾಗುತ್ತಿದೆ ಎಂದು ತಿಳಿಸಿದರು.

ಚುನಾವಣೆಯನ್ನು ಸುಸೂತ್ರವಾಗಿ ನಡೆಸಲು 4 ಮಂದಿ ಜಿಲ್ಲಾ ಚುನಾವಣಾಧಿಕಾರಿಗಳು , 28 ಮಂದಿ ಅಧಿಕ ಜಿಲ್ಲಾ ಚುನಾವಣಾಧಿಕಾರಿಗಳು, 53 ಮಂದಿ ಚುನಾವಣಾಧಿಕಾರಿಗಳು, 53 ಮಂದಿ ಹೆಚ್ಚುವರಿ ಚುನಾವಣಾಧಿಕಾರಿಗಳು, 198 ಮಂದಿ ಸಹಾಯಕ ಚುನಾವಣಾಧಿಕಾರಿಗಳು, 27 ಮಂದಿ ಇ.ಆರ್.ಓ. , 63 ಮಂದಿ ಎ.ಇ.ಆರ್.ಓ., 5 ಮಂದಿ ವಿಶೇಷ ಚುನಾವಣಾ ವೀಕ್ಷಕರು, 27 ಮಂದಿ ಚುನಾವಣಾ ವೀಕ್ಷಕರು ಹಾಗೂ 88 ಮಂದಿ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಶ್ರೀನಿವಾಸಚಾರಿ ಅವರು ತಿಳಿಸಿದರು.

ಬೆಂಗಳೂರು ನಗರ ಜಿಲ್ಲಾಧಿಕಾರಿಗಳನ್ನು ಮತ್ತು ಬಿ.ಬಿ.ಎಂ.ಪಿ.ಯ ಮೂವರು ಅಪರ/ಜಂಟಿ ಆಯುಕ್ತರುಗಳನ್ನು ಜಿಲ್ಲಾ ಚುನಾವಣಾಧಿಕಾರಿಗಳನ್ನಾಗಿ, ಬಿ.ಬಿ.ಎಂ.ಪಿ.ಯ 28 ಅಪರ/ಜಂಟಿ ಉಪ ಆಯುಕ್ತರುಗಳನ್ನು ಅಧಿಕ ಜಿಲ್ಲಾ ಚುನಾವಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ ಎಂದ ಅವರು, ಮತದಾರರ ಪಟ್ಟಿಯನ್ನು ದೋಷರಹಿತವಾಗಿ ತಯಾರಿಸುವ ಸಲುವಾಗಿ ಕಂದಾಯ ಅಧಿಕಾರಿಗಳನ್ನು ಮತದಾರರ ನೋಂದಣಾಧಿಕಾರಿ, ಸಹಾಯಕ ಕಂದಾಯ ಅಧಿಕಾರಿಗಳನ್ನು ವಿಭಾಗವಾರು ಉಪ ನೋಂದಣಾಧಿಕಾರಿಯಾಗಿ ನೇಮಕ ಮಾಡಲಾಗಿದೆ ಎಂದು ತಿಳಿಸಿದರು.

ಚುನಾವಣೆಗೆ ಸ್ಪರ್ಧಿಸಲಿರುವ ಅಭ್ಯರ್ಥಿಗಳಿಗೆ ಐದು ಲಕ್ಷ ವೆಚ್ಚ ಮಿತಿಯನ್ನು ನಿಗದಿಪಡಿಸಿದೆ ಎಂದ ಅವರು, ಚುನಾವಣಾ ವೆಚ್ಚ ಪರಿಶೀಲಿಸುವ ಸಲುವಾಗಿ 88 ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದರು.

ಬಿ.ಬಿ.ಎಂ.ಪಿ. ವಾರ್ಡ್‌ವಾರು ಮತದಾರರ ಪಟ್ಟಿಗಳನ್ನು ರಾಜ್ಯ ಚುನಾವಣಾ ಆಯೋಗದ ಮೇಲ್ವಿಚಾರಣೆ ಮತ್ತು ನಿಯಂತ್ರಣಕ್ಕೊಳ್ಳಪಟ್ಟು ಚಾಲ್ತಿಯಲ್ಲಿರುವ ಕರ್ನಾಟಕ ವಿಧಾನಸಭಾ ಮತದಾರರ ಪಟ್ಟಿಗಳನ್ನು ಅಳವಡಿಸಿಕೊಂಡು ಸಿದ್ದಪಡಿಸಲಾಗಿದ್ದು, ಚುನಾವಣೆಗೆ ನಾಮಪತ್ರ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನದವರೆಗೂ ಮತದಾರರ ಪಟ್ಟಿಯಲ್ಲಿ ಅರ್ಹ ಮತದಾರರ ಹೆಸರನ್ನು ಸೇರ್ಪಡೆಮಾಡಲು ಅವಕಾಶ ಕಲ್ಪಿಸಲಾಗಿದ್ದು, ಬಿ.ಬಿ.ಎಂ.ಪಿ. ವೆಬ್‌ಸೈಟ್ www.bbmp.gov.in ನಲ್ಲಿ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಮತದಾರರ ಪಟ್ಟಿಯನ್ನು ಅಳವಡಿಸಲಾಗಿದ್ದು, ಮತದಾರರು ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಬಗ್ಗೆ ಮತ್ತು ತಮ್ಮ ಮತಗಟ್ಟೆಗಳ ವಿಳಾಸ ಮತ್ತು ಮತಗಟ್ಟೆ ಸಂಖ್ಯೆ ತಿಳಿಯಬಹುದಾಗಿದೆ ಎಂದು ತಿಳಿಸಿದರು.

ಬೃಹತ್ ಬೆಂಗಳೂರು ಮಹಾನಗರಪಾಲಿಕೆ 2015 ರ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಆಯೋಗದ ದೂರವಾಣಿ ಸಂಖ್ಯೆ 080 – 22374740 ಹಾಗೂ ಬಿ.ಬಿ.ಎಂ.ಪಿ. ಕಚೇರಿಯ ದೂರವಾಣಿ ಸಂಖ್ಯೆ 080 – 22224748, 080 – 22221188 ಸಹಾಯವಾಣಿ ಮೂಲಕ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಪಲ್ಲವಿ/ಮಮತ/ಜಿಪಿಆರ್

# ಫಲಾನುಭವಿಗಳಿಗೆ ಇ–ಮಾರುಕಟ್ಟೆ ಸೌಲಭ್ಯದ ಕುರಿತು ಸಂವಾದ

ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ನೇಕಾರಿಕೆ ಉದ್ದೇಶಕ್ಕೆ ಸಾಲ ಸೌಲಭ್ಯ ಪಡೆದ ಫಲಾನುಭವಿಗಳು ತಯಾರಿಸುವ ಉತ್ಪನ್ನಗಳಿಗೆ ಇ–ಮಾರುಕಟ್ಟೆ ಮೂಲಕ ಮಾರುಕಟ್ಟೆ ಸೌಲಭ್ಯ ಒದಗಿಸುವ ಬಗ್ಗೆ ನಿಗಮದ ಅಧ್ಯಕ್ಷರಾದ ಶ್ರೀ ಎಂ. ರಾಮಚಂದ್ರಪ್ಪ ಅವರ ಆದ್ಯಕ್ಷತೆಯಲ್ಲಿ ಫ್ಲಿಪ್‌ಕಾರ್ಟ್ ಸಂಸ್ಥೆಯ ಪ್ರತಿನಿಧಿಗಳೊಂದಿಗೆ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಯಿತು.

ಫ್ಲಿಫ್ ಕಾರ್ಟ್ ಸಂಸ್ಥೆ ಮೂಲಕ ಇ–ಮಾರುಕಟ್ಟೆ ಸೌಲಭ್ಯವನ್ನು ಉಪಯೋಗಿಸಿಕೊಂಡು ಮಧ್ಯವರ್ತಿಗಳ ಹಾವಳಿಯಿಂದ ವಿಮುಕ್ತರಾಗುವಂತೆ ಮತ್ತು ವೃತ್ತಿಪರತೆ ಮತ್ತು ಕೌಶಲ್ಯ ಅಭಿವೃದ್ಧಿ ಹೊಂದಿ ಹೆಚ್ಚಿನ ಲಾಭ ಪಡೆಯುವಂತೆ ಫಲಾನುಭವಿಗಳಿಗೆ ಮಾರ್ಗದರ್ಶನ ನೀಡಲಾಯಿತು.

ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಯು.ಪಿ. ಚಂದ್ರಶೇಖರ್‌ರವರು ಫ್ಲಿಪ್‌ಕಾರ್ಟ್ ಸಂಸ್ಥೆಯ ಮೂಲಕ ಇ–ಮಾರುಕಟ್ಟೆ ಸೌಲಭ್ಯವನ್ನು ಒದಗಿಸಿಕೊಳ್ಳುವ ಬಗ್ಗೆ ಹಾಗೂ ಇದರಿಂದ ದೊರೆಯುವ ಆರ್ಥಿಕ ಲಾಭಾಂಶದ ಬಗ್ಗೆ ಫಲಾನುಭವಿಗಳಿಗೆ ಮಾಹಿತಿಯನ್ನು ನೀಡಿದರು.

ಅದೇ ರೀತಿ ಸಾಲ ಸೌಲಭ್ಯ ಪಡೆದಿದ್ದ ಸ್ತ್ರೀ ಶಕ್ತಿ ಸ್ವಸಹಾಯ ಗುಂಪಿನ ಸದಸ್ಯರಿಗೆ ಹಾಗೂ ವೈಯಕ್ತಿಕ ಸಾಲ ಪಡೆದ ಫಲಾನುಭವಿಗಳಿಗೆ ಚೆಕ್‌ಗಳನ್ನು ವಿತರಿಸಲಾಯಿತಲ್ಲದೆ ಸಾಲ ಪಡೆದ ಫಲಾನುಭವಿಗಳಿಗೆ ಸಾಲ ಸದುಪಯೋಗಪಡಿಸಿಕೊಳ್ಳುವ ಕುರಿತು ಸಂವಾದವನ್ನು ನಡೆಸಲಾಯಿತು.

ಪಹೊ:ಪೂರ್ಣಿಮ:ಜಿಪಿಆರ್.

# ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನ

**ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)**

2014ನೇ ಸಾಲಿನ 464 ಹುದ್ದೆಗಳ ಗೆಜೆಟೆಡ್ ಪ್ರೊಬೇಷನರ್ಸ್ ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಜುಲೈ 10 ರೊಳಗೆ ಅರ್ಜಿ ಸಲ್ಲಿಸಬೇಕಿದ್ದು, ಜುಲೈ 11 ಶುಲ್ಕ ಪಾವತಿಸಲು ಅಂತಿಮ ದಿನಾಂಕವಾಗಿದ್ದು, ಮುಖ್ಯ ಪರೀಕ್ಷೆಯ ಅರ್ಜಿಗೆ ಲಾಗ್‌ಇನ್ ಆಗಲು ಅವಶ್ಯವಿರುವ ವಿವರಗಳನ್ನು ಪೂರ್ವಭಾವಿ ಪರೀಕ್ಷೆಯ ಅರ್ಜಿಯಲ್ಲಿ ಅಭ್ಯರ್ಥಿಗಳೂ ನೀಡಿರುವ ನೋಂದಾಯಿತಿ ಇ-ಮೇಲ್ (ಮಿಂಚಂಚೆ) ಐ.ಡಿ.ಗೆ ಆಯೋಗವು ರವಾನಿಸಲಾಗುವುದು.

ಮುಖ್ಯ ಪರೀಕ್ಷೆಯ ಅರ್ಜಿಗೆ ಲಾಗ್‌ಇನ್ ಆಗಿ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡತಕ್ಕದ್ದು. ನಂತರ ಮುಖ್ಯ ಪರೀಕ್ಷೆಯ ಅರ್ಜಿಯ ಪ್ರತಿ ಹಾಗೂ ಶುಲಕ ಪಾವತಿಸುವ ಚಲನ್‌ಅನ್ನು ಡೌನ್‌ಲೋಡ್ ಮಾಡಿಕೊಂಡು ನಂತರ ನಿಗದಿತ ಶುಲ್ಕ ಪಾವತಿಸಿದ ಚಲನ್‌ನ ಪ್ರತಿ ಹಾಗೂ ಸಂಬಂಧಿತ ದಾಖಲಾತಿಗಳ ಸ್ವಯಂ ದೃಢೀಕೃತ ಪ್ರತಿಗಳನ್ನು ಭರ್ತಿಮಾಡಿದ ಗೆಜೆಟೆಡ್ ಪ್ರೊಬೇಷನರ್ಸ್ ಮುಖ್ಯ ಪರೀಕ್ಷೆಯ ಅರ್ಜಿಯೊಂದಿಗೆ ಲಗತ್ತಿಸಿ ಜುಲೈ 16 ರೊಳಗೆ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸತಕ್ಕದ್ದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ "ಅಭ್ಯರ್ಥಿಗಳಿಗೆ ಸೂಚನೆಗಳು" ಇದನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು. ಮುಖ್ಯ ಪರೀಕ್ಷೆಯನ್ನು ಸೆಪ್ಟೆಂಬರ್ 2015 ತಿಂಗಳಲ್ಲಿ ನಡೆಸಲಾಗುವುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಪಹೊ:ಜಿಪಿಆರ್.

# ಹಿರಿಯ ನಾಗರಿಕರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)**

ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಕ್ಟೋಬರ್ 1 ರಂದು ವಿಶ್ವ ಹಿರಿಯ ನಾಗರೀಕರ ದಿನಾಚರಣೆಯನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಹಿರಿಯ ನಾಗರೀಕರ ವಿವಿಧ ಕ್ಷೇತ್ರಗಳಲ್ಲಿ (ಶಿಕ್ಷಣ, ಸಾಹಿತ್ಯ, ಕಲೆ ಕಾನೂನು, ಪ್ರತಿಭೆ/ಕ್ರೀಡೆ ಹಾಗೂ ಹಿರಿಯ ನಾಗರೀಕರ ಕ್ಷೇತ್ರದಲ್ಲಿ ಸಮಾಜ ಸೇವೆಯನ್ನು ಒಳಗೊಂಡಂತೆ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರೀಕರಿಗೆ 6 ವೈಯಕ್ತಿಕ ಪ್ರಶಸ್ತಿಗಳನ್ನು ನೀಡಲು ಉದ್ದೇಶಿಸಿದೆ.

ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಗೆ ಬರುವ ಹಿರಿಯ ನಾಗರೀಕರಿಂದ ಹಾಗೂ ಸಂಸ್ಥೆಗಳಿಂದ ಪ್ರಸ್ತಾವನೆಯನ್ನು ಆಹ್ವಾನಿಸಲಾಗಿದೆ.

ಇಚ್ಚೆಯುಳ್ಳವರು ಜುಲೈ 30 ರೊಳಗಾಗಿ ಈ ಕಚೇರಿಯಿಂದ ಅರ್ಜಿಯನ್ನು ಪಡೆದು ಭರ್ತಿಮಾಡಿ ಪ್ರಸ್ತಾವನೆಯನ್ನು ಸಲ್ಲಿಸಬೇಕು. ತದನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ

ಮಾಹಿತಿಗಾಗಿ  ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯನ್ನು ಸಂಪರ್ಕಿಸುವಂತೆ ಅಧಿಕೃತ ಪ್ರಕಟಣೆ ತಿಳಿಸಿದೆ.

ಪಹೊ:ಜಿಪಿಆರ್.